# All India Radio: Bangalore
# Regional Bulletin In Kannada
# 04.10.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 04.10.2025 / 2.30 p.m.

<><><><>

ಮುಖ್ಯಾಂಶಗಳು

1. ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸುತ್ತಿಲ್ಲ ; ಮುಖ್ಯಮಂತ್ರಿ ಸ್ಪಷ್ಟನೆ
2. ಇಂದಿನಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಆರಂಭ
3. ವಿಶ್ವ ಬಾಹ್ಯಾಕಾಶ ಸಪ್ತಾಹ ; ಬೆಂಗಳೂರು ಜವಾಹರ್‌ಲಾಲ್ ನೆಹರು ತಾರಾಲಯದಲ್ಲಿ ೨ ದಿನಗಳ ವಿಶೇಷ ಕಾರ್ಯಕ್ರಮ
4. ರಾಜ್ಯ ವಿಧಾನಪರಿಷತ್ ಪಶ್ಚಿಮ ಪದವೀಧರ ಕ್ಷೇತ್ರ ; ಮತದಾರರ ಪಟ್ಟಿ ತಯಾರಿಕೆಗೆ ಸಿದ್ಧತೆ

<><><><>

ಗ್ಯಾರಂಟಿ ಯೋಜನೆಗಳ ಯಶಸ್ಸು ವಿರೋಧಪಕ್ಷದವರನ್ನು ಆತಂಕಗೊಳಿಸಿದೆ. ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದು ಗ್ಯಾರಂಟಿಗಳನ್ನು ತಪ್ಪದೇ ನೀಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಅವರು ಇಂದು ಬೆಳಗಾವಿಯ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯ ಅನುದಾನವನ್ನು ಗ್ಯಾರಂಟಿಗಳಿಗೆ ಬಳಸಿಕೊಳ್ಳುತ್ತಿಲ್ಲ ಎಂದರು. ವಿಪಕ್ಷ ನಾಯಕ ಆರ್.ಅಶೋಕ್ ಅವರ ಹೇಳಿಕೆಗೆ ಪ್ರತಿಕ್ರಮಿಸಿದ ಮುಖ್ಯಮಂತ್ರಿ,

ಎನ್‌ಡಿಆರ್‌ಎಫ್ ಅನುದಾನವನ್ನು ಗ್ಯಾರಂಟಿಗಳಿಗೆ ಬಳಸುತ್ತಿಲ್ಲ. ಗ್ಯಾರಂಟಿ ಯೋಜನೆಗಳ ಯಶಸ್ಸು ಅವರಲ್ಲಿ ಆತಂಕವನ್ನುಂಟು ಮಾಡಿದೆ. ರಾಜ್ಯದ ಗ್ಯಾರಂಟಿ ಯೋಜನೆಗಳನ್ನು ಬಿಹಾರ, ದೆಹಲಿ, ಮಹಾರಾಷ್ಟ್ರ, ಮಧ್ಯಪ್ರದೇಶ, ಹರಿಯಾಣ ಸೇರಿದಂತೆ ಹಲವು ರಾಜ್ಯಗಳಲ್ಲಿ ಅನುಕರಿಸಿದ್ದಾರೆ ಎಂದು ಸ್ಪಷ್ಟಪಡಿಸಿದರು. ಬೆಳಗಾವಿಯಲ್ಲಿ ಬಿಮ್ಸ್‌ನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ೨೦೧೭ರಲ್ಲಿ ಶಂಕುಸ್ಥಾಪನೆ ಹಾಗೂ ಇಂದು ಉದ್ಘಾಟನೆ ನೆರವೇರಿಸಿರುವುದು ಸಂತಸ ತಂದಿದೆ. ಹಿಂದಿನ ಸರ್ಕಾರದ ಅವಧಿಯಲ್ಲಿ ಈ ಯೋಜನೆ ಕಾರ್ಯಗತವಾಗಿರಲಿಲ್ಲ. ಆಸ್ಪತ್ರೆಯ ನಿರ್ವಹಣೆಯನ್ನು ಯಾವುದೇ ಖಾಸಗಿ ಸಂಸ್ಥೆಗೆ ನೀಡಲಾಗಿಲ್ಲ ಎಂದು ಮುಖ್ಯಮಂತ್ರಿ ತಿಳಿಸಿದರು. ಶಾಸಕ ಸಿ.ಟಿ.ರವಿಯವರು ಮುಖ್ಯಮಂತ್ರಿಯವರ ವಿಚಾರದಲ್ಲಿ ಮಾಡಿರುವ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ಮುಖ್ಯಮಂತ್ರಿ ಹುದ್ದೆ ವಿಷಯ ಕಾಂಗ್ರೆಸ್ ಪಕ್ಷದ ಆಂತರಿಕ ವಿಚಾರವಾಗಿದ್ದು, ಇದಕ್ಕೆ ಉಳಿದವರು ತಲೆಕೆಡಿಸಿಕೊಳ್ಳುವ ಅಗತ್ಯವಿಲ್ಲ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೩೧ ಸೆಕೆಂಡ್‌ಗಳು)**

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸದಾಶಿವನಗರ ನಿವಾಸದಲ್ಲಿ ಸಮೀಕ್ಷೆ ಸಿಬ್ಬಂದಿಗೆ ತಮ್ಮ ಮಾಹಿತಿ ನೀಡುವ ಮೂಲಕ ಇಂದು ಉದ್ಘಾಟಿಸಿದರು. ಉಪಮುಖ್ಯಮಂತ್ರಿಯವರ ಪತ್ನಿ ಉಷಾ, ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ತುಳಸಿ ಮದ್ದಿನೇನಿ, ಜಿಬಿಎ ವಿಶೇಷ ಆಯುಕ್ತ ಮುನೀಶ್ ಮೌದ್ಗೀಲ್, ಬೆಂಗಳೂರು ನಗರ ಕೇಂದ್ರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್, ಬೆಂಗಳೂರು ನಗರ ಪಶ್ಚಿಮ ಪಾಲಿಕೆ ಆಯುಕ್ತ ರಾಜೇಂದ್ರನ್ ಉಪಸ್ಥಿತರಿದ್ದರು.

ಸಮೀಕ್ಷೆ ನಡೆಸಲು ವಿವಿಧ ಇಲಾಖೆಗಳಿಂದ ನಿಯೋಜಿಸಲ್ಪಟ್ಟ ಸಮೀಕ್ಷಾದಾರರಿಗೆ ಆಯಾ ನಗರ ಪಾಲಿಕೆಗಳಲ್ಲಿ ಎರಡು ಬಾರಿ ತರಬೇತಿ ನೀಡಲಾಗಿದ್ದು, ಸಮೀಕ್ಷಾ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಲು ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಆಯುಕ್ತರ ಮೇಲ್ವಿಚಾರಣೆಯಲ್ಲಿ, ಅಪರ ಆಯುಕ್ತರು, ಜಂಟಿ ಆಯುಕ್ತರು ಮತ್ತು ಉಪ ಆಯುಕ್ತರು ಸಮೀಕ್ಷಾ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಅಧಿಕಾರಿಗಳಿಗೆ ನಿನ್ನೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ ನೀಡಿದ್ದರು. ಅದರಂತೆ ಬೆಂಗಳೂರಿನ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬರಂತೆ ಕೆ.ಎ.ಎಸ್ ಹಿರಿಯ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳೆಂದು ಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ. ಮತ್ತು ಒಟ್ಟು ೩೪ ಕೆ.ಎ.ಎಸ್ ಅಧಿಕಾರಿಗಳಿಗೆ ಸಮೀಕ್ಷಾ ಕಾರ್ಯವನ್ನು ಸುಗಮವಾಗಿ ನಿರ್ವಹಿಸಲು ಸೂಕ್ತ ಜವಾಬ್ದಾರಿ ನೀಡಲಾಗಿದೆ ಎಂದು ತಿಳಿಸಿದ್ದರು. ಇನ್ನು ಜಿಬಿಎ ವ್ಯಾಪ್ತಿಯಲ್ಲಿ ಇಂದಿನಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯ ಆರಂಭವಾಗಿದ್ದು, ನಗರದ ಎಲ್ಲಾ ನಾಗರಿಕರು ಆಧಾರ್ ಕಾರ್ಡ್/ರೇಷನ್ ಕಾರ್ಡ್ ಸೇರಿದಂತೆ ಇತರ ದಾಖಲೆಗಳೊಂದಿಗೆ ಸಮೀಕ್ಷಾದಾರರಿಗೆ ಸಹಕರಿಸುವಂತೆ ಮುಖ್ಯ ಆಯುಕ್ತರು ತಿಳಿಸಿದ್ದಾರೆ.

<><><><>

ವಿಶ್ವ ಬಾಹ್ಯಾಕಾಶ ಸಪ್ತಾಹದ ಅಂಗವಾಗಿ ಜಗತ್ತಿನಾದ್ಯಂತ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಈ ಸಂದರ್ಭದಲ್ಲಿ ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿ ವಿಜ್ಞಾನಾಭಿಮಾನಿಗಳಿಗೆ ಇಂದು ಮತ್ತು ನಾಳೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಎರಡು ದಿನಗಳ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸ್ಪರ್ಧೆಗಳು, ಕಾರ್ಯಾಗಾರ ಹಾಗೂ

ಸಾರ್ವಜನಿಕರಿಗೆ ಉಪನ್ಯಾಸಗಳ ಮೂಲಕ ಬಾಹ್ಯಾಕಾಶ ವಿಜ್ಞಾನವನ್ನು ಹತ್ತಿರದಿಂದ ಅರಿಯುವ ಅವಕಾಶ ಕಲ್ಪಿಸಲಾಗಿದೆ. ವಿಜ್ಞಾನ ಮತ್ತು ತಂತ್ರಜ್ಞಾನದ ಅಂತಾರಾಷ್ಟ್ರೀಯ ಸಂಭ್ರಮಾಚರಣೆಯಾಗಿ ಮತ್ತು ಮನುಕುಲಕ್ಕೆ ನೀಡಿದ ಕೊಡುಗೆಯ ಸ್ಮರಣಾರ್ಥ ಜಗತ್ತಿನಾದ್ಯಂತ ಇಂದಿನಿಂದ ಇದೇ ೧೦ರ ವರೆಗೆ ವಿಶ್ವ ಬಾಹ್ಯಾಕಾಶ ಸಪ್ತಾಹ ಆಚರಿಸಲಾಗುತ್ತಿದೆ. ಈ ಸಪ್ತಾಹವನ್ನು ಅಕ್ಟೋಬರ್ ೪ರ ಮಾನವನಿರ್ಮಿತ ಮೊದಲ ಕೃತಕ ಉಪಗ್ರಹ ಸ್ಪುಟ್ನಿಕ್-೧ರ ಉಡಾವಣೆ ಮತ್ತು ಅಕ್ಟೋಬರ್ ೧೦ರ ಬಾಹ್ಯಾಕಾಶ ಒಪ್ಪಂದಕ್ಕೆ ಸಹಿ ಹಾಕಿದ ಸ್ಮರಣಾರ್ಥ ನಡೆಸಲಾಗುತ್ತಿದೆ. ಇಂದು ಬೆಳಗ್ಗೆ ನಡೆದ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋದ ಹಿರಿಯ ವಿಜ್ಞಾನಿ ರಿತು ಕರಿಧಾಳ ಕಾರ್ಯಕ್ರಮ ಉದ್ಘಾಟಿಸಿದರು. ಅವರು “ಶುಕ್ರಗ್ರಹ-ನಮ್ಮ ನೆರೆಯ ಗ್ರಹ” ಎಂಬ ವಿಷಯದ ಕುರಿತು ಉಪನ್ಯಾಸ ನೀಡಿದರು. ಈ ವೇಳೆ ಅವರು, ಭಾರತದ ಬಾಹ್ಯಾಕಾಶ ಪಯಣದ ಸಂಕ್ಷಿಪ್ತ ಚಿತ್ರಣ ನೀಡಿದರು. ಕಾರ್ಯಕ್ರಮದ ಭಾಗವಾಗಿ ಎಂಟರಿಂದ ಹತ್ತನೇ ತರಗತಿಯ ವಿದ್ಯಾರ್ಥಿಗಳಿಗೆ ಬಾಹ್ಯಾಕಾಶ ರಸಪ್ರಶ್ನೆ ಸ್ಪರ್ಧೆ ಜರುಗುತ್ತಿದ್ದು, ಪ್ರಾಥಮಿಕ ಹಂತದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಮಧ್ಯಾಹ್ನದ ಅಂತಿಮ ಸುತ್ತಿನಲ್ಲಿ ತಂಡಗಳಾಗಿ ಸ್ಪರ್ಧಿಸಲಿದ್ದಾರೆ. ನಾಳೆ ಆರರಿಂದ ಹತ್ತನೇ ತರಗತಿಯ ಮಕ್ಕಳಿಗಾಗಿ' ಬಾಹ್ಯಾಕಾಶ ಯಾನ - ಭೂತ, ವರ್ತಮಾನ ಮತ್ತು ಭವಿಷ್ಯ ಎಂಬ ವಿಷಯದ ಬಗ್ಗೆ ಚಿತ್ರಕಲಾ ಸ್ಪರ್ಧೆ ಏರ್ಪಡಿಸಲಾಗಿದೆ. ಇದರ ಜೊತೆಗೆ ಆದಿತ್ಯ-ಎಲ್೧ ಮಾದರಿ ತಯಾರಿಕಾ ಕಾರ್ಯಾಗಾರವನ್ನು ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದೆ. ವಿದ್ಯಾರ್ಥಿಗಳ ಉತ್ಸಾಹಭರಿತ ಪಾಲ್ಗೊಳ್ಳುವಿಕೆಯಿಂದ ತಾರಾಲಯದ ಆವರಣವೇ ಸಂಭ್ರಮದಿಂದ ಕಂಗೊಳಿಸುತ್ತಿದೆ. ನಾಳೆ ಸಂಜೆ ೪ ಗಂಟೆಗೆ ಇಸ್ರೋ ವಿಜ್ಞಾನಿ ಎಂ. ವಿ. ರೂಪಾ ಅವರು “ಮಂಗಳ ಗ್ರಹ ಮತ್ತು

ಮಂಗಳಯಾನ” ವಿಷಯದ ಕುರಿತು ಸಾರ್ವಜನಿಕ ಉಪನ್ಯಾಸ ನೀಡಲಿದ್ದಾರೆ. ಎರಡು ದಿನಗಳ ಈ ಬಾಹ್ಯಾಕಾಶ ಸಪ್ತಾಹ ಕಾರ್ಯಕ್ರಮವು ವಿಚಾರ ವಿನಿಮಯ, ವಿಜ್ಞಾನದ ಕುರಿತು ಕುತೂಹಲ ಮತ್ತು ವೈಜ್ಞಾನಿಕ ಚಿಂತನೆಗೆ ಪ್ರೇರಣೆ ನೀಡುವಲ್ಲಿ ಪ್ರಮುಖ ಪಾತ್ರವಹಿಸಲಿದೆ. ಕಾರ್ಯಕ್ರಮದ ಕುರಿತು ಇಸ್ರೋ ಮಾಜಿ ವಿಜ್ಞಾನಿ, ಜವಾಹಾರ್‌ಲಾಲ್ ನೆಹರು ತಾರಾಲಯದ ನಿರ್ದೇಶಕ ಡಾ. ಬಿ.ಆರ್. ಗುರುಪ್ರಸಾದ್ ಮಾಹಿತಿ ನೀಡಿದರು.

**ಧ್ವನಿ : ಡಾ. ಬಿ.ಆರ್. ಗುರುಪ್ರಸಾದ್ (೩೭ ಸೆಕೆಂಡ್‌ಗಳು)**

<><><><>

ಕರ್ನಾಟಕ ವಿಧಾನ ಪರಿಷತ್ತಿನ ಪಶ್ಚಿಮ ಪದವೀಧರ ಮತಕ್ಷೇತ್ರಕ್ಕೆ ೨೦೨೬ ರಲ್ಲಿ ಚುನಾವಣೆ ನಡೆಯಲ್ಲಿದ್ದು, ಈ ಕುರಿತು ಮತದಾರರ ಪಟ್ಟಿ ತಯಾರಿಕೆಗೆ ಸಿದ್ಧತೆ ಪ್ರಾರಂಭವಾಗಿದ್ದು, ಅರ್ಹ ಮತದಾರರ ಸೇರ್ಪಡೆಗೆ ಇದೀಗ ಅವಕಾಶ ಕಲ್ಪಿಸಲಾಗಿದೆ. ಮತದಾರರ ಪಟ್ಟಿಯನ್ನು ಕ್ರಮಬದ್ಧವಾಗಿ ಮತ್ತು ನ್ಯಾಯಬದ್ಧವಾಗಿ ತಯಾರಿಸಲು ರಾಜಕೀಯ ಪಕ್ಷಗಳು, ಸಾರ್ವಜನಿಕರು ಸಹಕಾರ ನೀಡಬೇಕೆಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಅವರು ಕಾರವಾರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆಸಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

<><><><>

ಇಂದು ವಿಶ್ವ ಪ್ರಾಣಿ ದಿನ. ೧೯೩೧ ರಿಂದ ಆಚರಿಸಲಾಗುತ್ತಿರುವ ಈ ದಿನವು, ವಿಶ್ವದಾದ್ಯಂತ ಪ್ರಾಣಿಗಳ ಯೋಗಕ್ಷೇಮ, ರಕ್ಷಣೆ ಮತ್ತು ಅವುಗಳ ಹಕ್ಕುಗಳನ್ನು ಪ್ರತಿಪಾದಿಸುತ್ತದೆ. ಈ ದಿನ ಅಳಿವಿನಂಚಿನಲ್ಲಿರುವ ಪ್ರಭೇದಗಳ ಕುರಿತು ಜಾಗೃತಿ ಮೂಡಿಸುತ್ತದೆ. ಅಲ್ಲದೇ ಸಾಕುಪ್ರಾಣಿಗಳ ಜವಾಬ್ದಾರಿಯುತ ಮಾಲೀಕತ್ವವನ್ನು ಉತ್ತೇಜಿಸಿ, ಎಲ್ಲ ಜೀವಿಗಳ ಬಗ್ಗೆ ಸಹಾನುಭೂತಿ ಹಾಗೂ ಸಂರಕ್ಷಣಾ ಪ್ರಯತ್ನಗಳನ್ನು

ಬೆಂಬಲಿಸುತ್ತದೆ. ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು, 'ವಿಶ್ವ ಪ್ರಾಣಿ ದಿನದ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ ಜೊತೆಗೆ ಪ್ರಾಣಿಗಳ ಹಿತವನ್ನೂ ಕಾಪಾಡಲು ಆದ್ಯತೆ ನೀಡೋಣ. ಬೀದಿ ನಾಯಿಗಳು ಮತ್ತು ಪ್ರಾಣಿಗಳು ತೊಡೆದು ಹಾಕಬೇಕಾದ ಸಮಸ್ಯೆ ಅಲ್ಲ. ಕಾಳಜಿ ವಹಿಸಬೇಕಾದ ಜೀವಗಳು ಎಂದು ಹೇಳಿದ್ದಾರೆ

<><>. ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>